ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು
ದಿನಾಂಕ 27.10.2023

ಸಂಖ್ಯೆ:ಜಿಎಲ್5/98/2022–23

**"ತುರ್ತು"**

## ಸುತ್ತೋಲೆ

ವಿಷಯ: ಭ್ರಷ್ಟಾಚಾರ ವಿರುದ್ಧ ಜಾಗೃತಿ ಮೂಡಿಸಲು **"ಜಾಗೃತಿ ಅರಿವು ಸಪ್ತಾಹ"** ಆಚರಿಸುವ ಬಗ್ಗೆ
ಉಲ್ಲೇಖ: ಅಪರ ಜಿಲ್ಲಾಧಿಕಾರಿ, ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ, ಮೈಸೂರು ಇವರ ಪತ್ರ ಸಂಖ್ಯೆ: MYSDC/MAG1/MLO/52/2023(E-253588), ದಿನಾಂಕ: 13.10.2023

*****

ಉಲ್ಲೇಖಿತ ಪತ್ರದನ್ವಯ ದಿನಾಂಕ: 30.10.2023 ರಿಂದ 05.11.2023ರ ವರೆಗಿನ ಭ್ರಷ್ಟಾಚಾರ ವಿರುದ್ಧ ಜಾಗೃತಿ ಮೂಡಿಸಲು **"ಜಾಗೃತಿ ಅರಿವು ಸಪ್ತಾಹವನ್ನು" (Vigilance Awareness Week)** ದಿನಾಂಕ: 30.10.2023ರಂದು ಒಂದು ಪ್ರತಿಜ್ಞೆಯನ್ನು ತೆಗೆದುಕೊಳ್ಳುವುದರ ಮೂಲಕ ಆರಂಭಿಸಲು ಕೋರಿರುತ್ತಾರೆ. ಈ ಹಿನ್ನೆಲೆಯಲ್ಲಿ ದಿನಾಂಕ: 30.10.2023 ರಂದು ಪೂರ್ವಾಹ್ನ 11.00ಗಂಟೆಗೆ ಜಾಗೃತಿ ಅರಿವು ಸಪ್ತಾಹವನ್ನು ಆಚರಿಸಲು ಹಿಂಪುಟದ ಪ್ರತಿಜ್ಞೆಯನ್ನು ತೆಗೆದುಕೊಳ್ಳುವ ಸಂಬಂಧ, ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರು, ನಿರ್ದೇಶಕರು, ಬಟವಾಡೆ ಅಧಿಕಾರಿಗಳು ಮತ್ತು ಘಟಕ ಕಾಲೇಜುಗಳ ಪ್ರಾಂಶುಪಾಲರುಗಳು ಸೂಕ್ತ ಕ್ರಮವನ್ನು ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ಅನುಪಾಲನಾ ವರದಿಯನ್ನು ಈ ಕಛೇರಿಗೆ ಸಲ್ಲಿಸುವಂತೆ ಕೋರಿದೆ.

ಉಪ ಕುಲಸಚಿವ(ಸಾಮಾನ್ಯ)
27-10-2023

ಇವರಿಗೆ:

1. ಅಧ್ಯಕ್ಷರು/ನಿರ್ದೇಶಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಮಾ.ಗಂ.,ಮೈಸೂರು
2. ಕುಲಸಚಿವರು(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
4. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
5. ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳ ಪ್ರಾಂಶುಪಾಲರು, ಮೈವಿವಿ, ಮೈಸೂರು
6. ನಿರ್ದೇಶಕರು, ಐ.ಸಿ.ಡಿ, ಗಣಕ ವಿಜ್ಞಾನ, ಮಾನಸಗಂಗೋತ್ರಿ, ಮೈಸೂರು –ಸದರಿ ಪತ್ರವನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಲಾಗಿದೆ.
7. ಮಾನ್ಯ ಕುಲಪತಿ /ಕುಲಸಚಿವ /ಕುಲಸಚಿವ (ಪರೀಕ್ಷಾಂಗ) /ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈವಿವಿ, ಮೈಸೂರು

ಪ್ರತಿ:

1. ಅಪರ ಜಿಲ್ಲಾಧಿಕಾರಿ, ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ, ಮೈಸೂರು
2. ಕಛೇರಿ ಪ್ರತಿ.

# ಪ್ರತಿಜ್ಞೆ

ನಮ್ಮ ದೇಶದ ಆರ್ಥಿಕ, ರಾಜಕೀಯ ಮತ್ತು ಸಾಮಾಜಿಕ ಅಭಿವೃದ್ಧಿಗೆ ಭ್ರಷ್ಟಾಚಾರವು ಒಂದು ಪ್ರಮುಖ ಅಡಚಣೆಯಾಗಿದೆಯೆಂದು ನಾನು ನಂಬುತ್ತೇನೆ. ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡಲು ಸರ್ಕಾರ, ನಾಗರಿಕರು ಮತ್ತು ಖಾಸಗಿ ವಲಯದಂತಹ ಎಲ್ಲಾ ಪಾಲುದಾರರು ಒಟ್ಟಾಗಿ ಕೆಲಸ ಮಾಡಬೇಕಾಗುತ್ತದೆಂದು ನಾನು ನಂಬುತ್ತೇನೆ.

ಪ್ರತಿ ನಾಗರಿಕನು ಜಾಗರೂಕನಾಗಿದ್ದು, ಎಲ್ಲಾ ಸಮಯದಲ್ಲೂ ಉನ್ನತ ಗುಣಮಟ್ಟದ ಪ್ರಾಮಾಣಿಕತೆ ಮತ್ತು ನಿಷ್ಠೆಗೆ ಬದ್ಧನಾಗಿರಬೇಕೆಂದು ಹಾಗೂ ಭ್ರಷ್ಟಾಚಾರದ ವಿರುದ್ಧ ಹೋರಾಟವನ್ನು ಬೆಂಬಲಿಸಬೇಕೆಂದು ನಾನು ಅರಿತಿದ್ದೇನೆ.

ಆದ್ದರಿಂದ, ನಾನು ಈ ರೀತಿ ಪ್ರತಿಜ್ಞೆ ಮಾಡುತ್ತೇನೆ :-

* ಜೀವನದ ಎಲ್ಲಾ ಕ್ಷೇತ್ರಗಳಲ್ಲಿ ಪ್ರಾಮಾಣಿಕತೆ ಮತ್ತು ಕಾನೂನಿನ ನಿಯಮಗಳನ್ನು ಅನುಸರಿಸುತ್ತೇನೆ;
* ಲಂಚವನ್ನು ಪಡೆಯುವುದಿಲ್ಲ ಹಾಗೂ ನೀಡುವುದೂ ಇಲ್ಲ;
* ಎಲ್ಲಾ ಕಾರ್ಯಗಳನ್ನು ಪ್ರಾಮಾಣಿಕ ಮತ್ತು ಪಾರದರ್ಶಕ ರೀತಿಯಲ್ಲಿ ನಿರ್ವಹಿಸುತ್ತೇನೆ;
* ಸಾರ್ವಜನಿಕ ಹಿತಾಸಕ್ತಿಯಲ್ಲಿ ಕಾರ್ಯನಿರ್ವಹಿಸುತ್ತೇನೆ;
* ವೈಯಕ್ತಿಕ ನಡವಳಿಕೆಯಲ್ಲಿ ನಿಷ್ಠೆ ಪ್ರದರ್ಶಿಸುವ ಮೂಲಕ ಮಾದರಿಯಾಗಿರುತ್ತೇನೆ;
* ಯಾವುದೇ ಭ್ರಷ್ಟಾಚಾರದ ಘಟನೆಯನ್ನು ಸೂಕ್ತ ಸಂಸ್ಥೆಗೆ ವರದಿ ಮಾಡುತ್ತೇನೆ.

*****